ಕರ್ನಾಟಕ ಸರ್ಕಾರ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ

ಸಂಖ್ಯೆ:ಬಿಟಿಇ 03/ಇಸಿಎಸ್(1)/2022

ಆಯುಕ್ತರವರ ಕಛೇರಿ
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ
ಅರಮನೆ ರಸ್ತೆ, ಬೆಂಗಳೂರು -560001
ದೂರವಾಣಿ ಸಂಖ್ಯೆ:080-2220777
email:dte.commissioner@gmail.com
ದಿನಾಂಕ:10.08.2022

## ಸುತ್ತೋಲೆ

ವಿಷಯ: ಆಗಸ್ಟ್/ಸೆಪ್ಟಂಬರ್ 2022 ರ ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಬಗ್ಗೆ ಮಾಹಿತಿ

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಆಗಸ್ಟ್/ಸೆಪ್ಟಂಬರ್ 2022 ಡಿಪ್ಲೋಮ ಸೆಮಿಸ್ಟರ್ ಪರೀಕ್ಷೆಯ ಕುರಿತು ವಿವಿಧ ಹಂತದ ಪರೀಕ್ಷಾ ಕಾರ್ಯಗಳಿಗೆ ಈ ಕೆಳಗಿನಂತೆ ದಿನಾಂಕಗಳನ್ನು ನಿಗಧಿ ಮಾಡಲಾಗಿದ್ದು, ಸಂಬಂಧಪಟ್ಟ ಉಪನ್ಯಾಸಕರು/ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳ ಗಮನಕ್ಕೆ ತಪ್ಪದೇ ತರುವಂತೆ ತಿಳಸಲಾಗಿದೆ.

1. ಪ್ರಸಕ್ತ ಸೆಮಿಸ್ಟರ್‌ನ 2, 4 ಮತ್ತು 6 ನೇ ಸೆಮಿಸ್ಟರ್ ತರಗತಿಗಳ ಶೈಕ್ಷಣಿಕ ಅವಧಿಯ ಮುಕ್ತಾಯ ದಿ:17.08.2022
2. ಪ್ರಾಯೋಗಿಕ ಪರೀಕ್ಷೆಗಳ ಪ್ರಾರಂಭ ಮತ್ತು ಮುಕ್ತಾಯ ದಿನಾಂಕ: 22.08.2022 ರಿಂದ 29.08.2022 ರವರೆಗೆ
3. ಥಿಯರಿ ಪರೀಕ್ಷೆಗಳ ಪ್ರಾರಂಭ ಮತ್ತು ಮುಕ್ತಾಯ ದಿನಾಂಕ: 01.09.2022 ರಿಂದ 22.09.2022 ರವರೆಗೆ
4. ಥಿಯರಿ ಪರೀಕ್ಷಾ ಅವಧಿಯಲ್ಲಿ ಆಂತರಿಕ ಅಂಕಗಳನ್ನು ಪರಿವೀಕ್ಷಕರು ಪರಿಶೀಲಿಸುವುದು ಮತ್ತು ಆನ್‌ಲೈನ್‌ನಲ್ಲಿ ಅಪ್‌ಲೋಡ್ ಮಾಡುವುದು
5. ಸಂಸ್ಥೆಗಳು ಆನ್ ಲೈನ್‌ನಲ್ಲಿ (BTELinx) ಪ್ರವೇಶ ಪತ್ರಗಳನ್ನು ಮುದ್ರಿಸುವುದು ದಿನಾಂಕ: 17.08.2022

ಸಂಸ್ಥೆಗಳಲ್ಲಿ ಪ್ರಿನ್ಸಿಪಾಲರು ಬಿಟಿಇಲಿಂಕ್ಸ್ ಆನ್‌ಲೈನ್ ವೆಬ್‌ಪೋರ್ಟಲ್ ಅನ್ನು ತಾವೇ ಸ್ವತ: ಉಪಯೋಗಿಸುವುದರ ಜೊತೆಗೆ ಕನಿಷ್ಠ ಇಬ್ಬರು ಹಿರಿಯ ವಿಭಾಗಾಧಿಕಾರಿಗಳನ್ನು ವೆಬ್‌ಪೋರ್ಟಲ್ ಉಪಯೋಗಿಸಲು ಕಡ್ಡಾಯವಾಗಿ ನಿಯುಕ್ತಿಗೊಳಿಸಲು ತಿಳಿಸಲಾಗಿದೆ.

ಪರೀಕ್ಷಾ ದಿನಾಂಕಗಳಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ. ಪ್ರಯುಕ್ತ ಪ್ರಸಕ್ತ ಸಾಲಿನ ಎಲ್ಲಾ ಸೆಮಿಸ್ಟರ್ ವಿದ್ಯಾರ್ಥಿಗಳಿಗೆ, ಸದರಿ ಶೈಕ್ಷಣಿಕ ವರ್ಷದ ಪಠ್ಯಕ್ರಮವನ್ನು ವಿಶೇಷ ತರಗತಿಗಳನ್ನು ನಡೆಸುವುದೂ ಸೇರಿದಂತೆ ಪಾಠ ಪ್ರವಚನಗಳನ್ನು ನಿಗಧಿತ ಅವಧಿಯಲ್ಲಿ ಪೂರೈಸಲು ಹಾಗೂ ನಿಗದಿತ ಟೆಸ್ಟ್‌ಗಳನ್ನು ನಡೆಸಿ ಆಂತರಿಕ ಅಂಕಗಳ ವಹಿಯನ್ನು ಸಿದ್ಧಪಡಿಸಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಪ್ರಿನ್ಸಿಪಾಲರುಗಳಿಗೆ ಸೂಚಿಸಲಾಗಿದೆ.

ಕಾರ್ಯದರ್ಶಿ

ಇವರಿಗೆ:
ಎಲ್ಲಾ ಪಾಲಿಟೆಕ್ನಿಕ್ ಗಳ ಪ್ರಾಚಾರ್ಯರುಗಳಿಗೆ - ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

ಪ್ರತಿ:
1. ಕಂಪ್ಯೂಟರ್ ವಿಭಾಗಕ್ಕೆ
2. ಇಸಿಎಸ್/ಎಫ್ಎಸ್/ಇಎಪಿ/ಇಆರ್‌ಎಸ್ ವಿಭಾಗಗಳಿಗೆ
3. ಇ ಗವರ್ನೆನ್ಸ್ ವಿಭಾಗಕೆ
4. ಕಾರ್ಯದರ್ಶಿಯವರ ಆಪ್ತ ಶಾಖೆಗೆ